# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು – 572 103

ಸಂಖ್ಯೆ: ತುವಿ:.ಶೈ.ವಿ:ಪ.ವೇ.ಪ:2024–25:/1708 ದಿನಾಂಕ:31.07.2024

## ಪರಿಷ್ಕೃತ ಅಧಿಸೂಚನೆ

ವಿಷಯ : 2024–25 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿ ಕೋರ್ಸ್‌ಗಳ ಸಮ:ಬೆಸ ಸೆಮಿಸ್ಟರ್‌ನ ಶೈಕ್ಷಣಿಕ ವೇಳಾಪಟ್ಟಿಯನ್ನು ನಿಗದಿಪಡಿಸಿರುವ ಕುರಿತು.

ಉಲ್ಲೇಖ : 1) ಶೈಕ್ಷಣಿಕ ವೇಳಾಪಟ್ಟಿ ಸಮಿತಿಯ ಸಭಾ ನಡಾವಳಿಗಳ ದಿನಾಂಕ:31.05.2024
2) ವಿವಿ ಅಧಿಸೂಚನೆ ಸಂಖ್ಯೆ: ತುವಿ:.ಶೈ.ವಿ:ವೇ.ಪ:2024–25:/1687 ದಿ:29.07.2024
3) ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು–1) ಸರ್ಕಾರಿ ಆದೇಶ ಸಂ: ಇಡಿ 201 ಯುಎನ್ಇ:2023: ಬೆಂಗಳೂರು, ದಿ:30.07.2024
4) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:31.07.2024 (ಕಂಡಿಕೆ–19)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ 2024–25ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿಗಳ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ (01)ರ ಸಭಾ ನಡಾವಳಿಗಳಂತೆ, ಶೈಕ್ಷಣಿಕ ವೇಳಾ ಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸಿದ್ದು ಸದರಿ ಸಮಿತಿಯ ಸಭಾ ನಡಾವಳಿಗಳನ್ನು ವಿಶ್ವವಿದ್ಯಾನಿಲಯದ ಸಕ್ಷಮ ಪ್ರಾಧಿಕಾರವಾದ ವಿದ್ಯಾವಿಷಯಕ ಪರಿಷತ್ ಹಾಗೂ ಸಿಂಡಿಕೇಟ್ ಸಭೆಯ ಸ್ಥಿರೀಕರಣಕ್ಕೆ ಒಳಪಟ್ಟು, ಉಲ್ಲೇಖ (02)ರಲ್ಲಿ ಅಧಿಸೂಚನೆ ಹೊರಡಿಸಲಾಗಿತ್ತು. ಉಲ್ಲೇಖ (03) ಸರ್ಕಾರಿ ಆದೇಶದನ್ವಯ ಉಲ್ಲೇಖ (02)ರಲ್ಲಿ ವಿಶ್ವವಿದ್ಯಾನಿಲಯವು ಹೊರಡಿಸಿರುವ ಅಧಿಸೂಚನೆಯನ್ನು ಹಿಂಪಡೆದು ಉಲ್ಲೇಖ (04)ರ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ವಿವಿಧ ಸ್ನಾತಕ ಪದವಿ ಕೋರ್ಸ್‌ಗಳ ಸಮ:ಬೆಸ ಸೆಮಿಸ್ಟರ್ ವೇಳಾಪಟ್ಟಿಯನ್ನು (Calendar of Events) ಈ ಕೆಳಕಂಡಂತೆ ಪರಿಷ್ಕರಿಸಿ ಅಧಿಸೂಚಿಸಲಾಗಿದೆ.

### :ವಿವಿಧ ಸ್ನಾತಕ ಪದವಿಗಳ (2024–25) ನೇ ಸಾಲಿನ ಶೈಕ್ಷಣಿಕ ವೇಳಾಪಟ್ಟಿ:

### Under Graduate Calendar of Events for the Academic year – 2024-25

| ಕ್ರಮ ಸಂಖ್ಯೆ | ಶೈಕ್ಷಣಿಕ ಕಾರ್ಯಕ್ರಮಗಳ ವೇಳಾಪಟ್ಟಿಯ ವಿವರ | ನಿಗದಿಪಡಿಸಿರುವ ದಿನಾಂಕ |
|---|---|---|
| 1 | II, IV,VIನೇ ಸೆಮಿಸ್ಟರ್ ತರಗತಿಗಳ ಪುನರಾರಂಭ ದಿನಾಂಕ | 18.04.2024 |
| 2 | II, IV,VIನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ | 07.08.2024 |
| 3 | ಅಧ್ಯಾಪಕರ ರಜೆ | 08.08.2024 ರಿಂದ |
| 4 | II, IV,VIನೇ ಸೆಮಿಸ್ಟರ್ ಪರೀಕ್ಷೆ ಪ್ರಾರಂಭ | 13.08.2024 |
| 5 | ದಂಡ ಶುಲ್ಕವಿಲ್ಲದೆ ಪ್ರವೇಶಾತಿ ಕೊನೆಯ ದಿನಾಂಕ | 10.08.2024 |
| 6 | ರೂ.1000/– ದಂಡ ಶುಲ್ಕದೊಂದಿಗೆ ಪ್ರವೇಶಾತಿ ಕೊನೆಯ ದಿನಾಂಕ | 17.08.2024 |
| 7 | ಪ್ರವೇಶಾತಿ ತಃಖ್ತೆಯನ್ನು ತ್ರಿಪ್ರತಿಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕಾದ ಕೊನೆಯ ದಿನಾಂಕ (Submit to University in UUCMS) | 26.08.2024 |
| 8 | 2024–25ನೇ ಸಾಲಿನ Iನೇ, IIIನೇ, & Vನೇ, ಸೆಮಿಸ್ಟರ್ ತರಗತಿಗಳ ಪ್ರಾರಂಭ | 27.09.2024 |
| 9 | Iನೇ, IIIನೇ, & Vನೇ, ಸೆಮಿಸ್ಟರ್ ತರಗತಿಗಳ ಮುಕ್ತಾಯ | 20.01.2025 |
| 10 | ಅಧ್ಯಾಪಕರ ರಜೆ | 21.01.2025 ರಿಂದ |
| 11 | I, III, Vನೇ ಸೆಮಿಸ್ಟರ್ ಸೈದ್ಧಾಂತಿಕ ಪರೀಕ್ಷೆಗಳ ಪ್ರಾರಂಭ ದಿನಾಂಕ | 27.01.2025 |
| 12 | I, III, Vನೇ ಸೆಮಿಸ್ಟರ್ ಸೈದ್ಧಾಂತಿಕ ಪರೀಕ್ಷೆಗಳ ಮುಕ್ತಾಯ (ಮೌಲ್ಯಮಾಪನವೂ ಸೇರಿದಂತೆ) | 12.03.2025 |
| 13 | II, IV,VIನೇ ಸೆಮಿಸ್ಟರ್ ತರಗತಿಗಳ ಪುನರಾರಂಭ ದಿನಾಂಕ | 13.03.2025 |

| | | |
|---|---|---|
| 14 | II, IV,VIನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ | 03.07.2025 |
| 15 | ಅಧ್ಯಾಪಕರ ರಜೆ | 04.07.2025 |
| 16 | II, IV,VIನೇ ಸೆಮಿಸ್ಟರ್ ಪರೀಕ್ಷೆ ಪ್ರಾರಂಭ | 07.07.2025 |
| 17 | 2025–26ನೇ ಶೈಕ್ಷಣಿಕ ಸಾಲಿನ ತರಗತಿಗಳ ಪ್ರಾರಂಭ | 18.08.2025 |

ಬಿಎ/ ಬಿಎಸ್ಸಿ/ ಬಿ.ಕಾಂ/ ಬಿ.ಬಿ.ಎ/ ಬಿ.ಸಿ.ಎ/ ಬಿ.ಎಸ್.ಡಬ್ಲ್ಯೂ/ ಬಿ.ವೋಕ್ ಹಾಗೂ ಇತರೆ ಸ್ನಾತಕ ಪದವಿಗಳಿಗೆ ಅನ್ವಯವಾಗುವಂತೆ ಈ ಕೆಳಕಂಡ ಸೂಚನೆಗಳನ್ನು ವಿಶ್ವವಿದ್ಯಾನಿಲಯದ ವ್ಯಾಪ್ತಿಯ ಎಲ್ಲಾ ಸಂಯೋಜಿತ/ ಘಟಕ/ ಸ್ವಾಯತ್ತ ಕಾಲೇಜುಗಳು ತಪ್ಪದೇ ಪಾಲಿಸಲು ಸೂಚಿಸಿದೆ.

## ಸೂಚನೆಗಳು

1. ಶೈಕ್ಷಣಿಕ ವೇಳಾಪಟ್ಟಿಯಲ್ಲಿನ ಯಾವುದೇ ದಿನಾಂಕವು ರಜಾ ದಿನವೆಂದು ಘೋಷಿಸಲ್ಪಟ್ಟಲ್ಲಿ ಸದರಿ ದಿನಾಂಕದಿಂದ ನಂತರದ ಕರ್ತವ್ಯದ ದಿನ ಪ್ರಾರಂಭಗೊಳ್ಳುತ್ತದೆ.
2. ಕಾಲೇಜಿನ ಪ್ರಾಂಶುಪಾಲರು / ಮುಖ್ಯಸ್ಥರು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ 2024-25ನೇ ಶೈಕ್ಷಣಿಕ ಸಾಲಿನ ಶೈಕ್ಷಣಿಕ ವೇಳಾಪಟ್ಟಿಯನ್ನು ಅಧ್ಯಾಪಕರುಗಳ ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ಬರುವಂತೆ ಕಡ್ಡಾಯವಾಗಿ ಪ್ರಕಟಿಸಬೇಕು.
3. ಈಗಾಗಲೇ ಪರಿಚಯಿಸಲಾಗಿರುವ 2024-25ನೇ ಶೈಕ್ಷಣಿಕ ವೇಳಾಪಟ್ಟಿಗನುಗುಣವಾಗಿ ನಿಗದಿತ ಅವಧಿಯೊಳಗೆ ಎಲ್ಲಾ ತರಗತಿಗಳ ಪ್ರವೇಶಗಳನ್ನು ಯುಯುಸಿಎಂಎಸ್ ಮಾರ್ಗಸೂಚಿಗಳನ್ವಯ ಪೂರ್ಣಗೊಳಿಸಬೇಕು.
4. ವಿಶ್ವವಿದ್ಯಾನಿಲಯದ ನಿಯಮಗಳನುಸಾರ ಬೋಧನೆ ಹಾಗೂ ಪರೀಕ್ಷೆಗಳನ್ನು ನಡೆಸಬೇಕು.
5. ನಿಗದಿತ ಕೊನೆಯ ದಿನಾಂಕದ ನಂತರ ಪ್ರವೇಶವನ್ನು ಮಾಡಿಕೊಳ್ಳಲು ಅವಕಾಶವಿರುವುದಿಲ್ಲ.
6. ವಿವಿಧ ಸ್ನಾತಕ ಪದವಿಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಯು ನಿಯಮಾನುಸಾರ ಶೇ.75%ರಷ್ಟು ಹಾಜರಾತಿಯನ್ನು ಹೊಂದಿರತಕ್ಕದ್ದು. ಆಯಾ ಕಾಲೇಜುಗಳ ಪ್ರಾಂಶುಪಾಲರು ಈ ಬಗ್ಗೆ ನಿಗಾವಹಿಸಲು ಸೂಚಿಸಲಾಗಿದೆ.
7. ಸ್ನಾತಕ ಪದವಿಗಳ ಪ್ರವೇಶ ಪ್ರಕ್ರಿಯೆಯ ದಿನಾಂಕ ಮುಕ್ತಾಯಗೊಂಡ ನಂತರ ಪ್ರಾಂಶುಪಾಲರುಗಳು ವಿದ್ಯಾರ್ಥಿಗಳಿಗೆ ಶಿಫಾರಸ್ಸು ಪತ್ರವನ್ನು ನೀಡಿ ವಿಶ್ವವಿದ್ಯಾನಿಲಯದ ಅನುಮತಿಗಾಗಿ ಕಳುಹಿಸಬಾರದು. ಈ ಹಂತದಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಿದಲ್ಲಿ ಪಠ್ಯಕ್ರಮ ಬೋಧನೆಯಿಂದ ವಂಚಿತರಾಗುವುದಲ್ಲದೆ ನಿಯಮಾನುಸಾರ ಶೇ.75% ರಷ್ಟು ಹಾಜರಾತಿ ಪಡೆಯಲು ಸಾಧ್ಯವಾಗುವುದಿಲ್ಲ.
8. ಪ್ರಥಮ ಸೆಮಿಸ್ಟರ್‌ಗೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ಪ್ರವೇಶ ಪಡೆಯಲು ನಿಗದಿಪಡಿಸಿರುವ ಕೊನೆಯ ದಿನಾಂಕದಿಂದ 15 ದಿನಗಳೊಳಗಾಗಿ ಸಂಬಂಧಪಟ್ಟ ಎಲ್ಲಾ ಮೂಲ ದಾಖಲಾತಿಗಳನ್ನು ಹಾರ್ಡ್ ಮತ್ತು ವಿದ್ಯಾರ್ಥಿಗಳ ಅಂಕಿ ಅಂಶದ ಮಾಹಿತಿಯ ಸಾಫ್ಟ್ ಕಾಪಿಯನ್ನು ಎಕ್ಸೆಲ್ ಶೀಟ್‌ನಲ್ಲಿ dracademictut@gmail.com ಸಲ್ಲಿಸಿ ಅನುಮೋದಿನೆಗಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.
9. ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕಾಗಿರುವ ಪ್ರವೇಶಾತಿ ಶುಲ್ಕಗಳನ್ನು **ಹಣಕಾಸು ಅಧಿಕಾರಿಗಳು ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರ ಪದನಾಮದಲ್ಲಿ ಬ್ಯಾಂಕಿನ ಖಾತೆ ಸಂಖ್ಯೆ: 36954906897 ಐಎಫ್‌ಎಸ್‌ಸಿ ಕೋಡ್: SBIN0040850 ಸ್ಟೇಟ್ ಬ್ಯಾಂಕ್ ಇಂಡಿಯಾ ವಿಶ್ವವಿದ್ಯಾನಿಲಯದ ಶಾಖೆಗೆ** ಪಾವತಿಯಾಗುವಂತೆ ಸಂದಾಯ ಮಾಡಿ ಚಲನ್‌ನ ಒಂದು ಮೂಲ ಪ್ರತಿಯನ್ನು ಹಣಕಾಸು ವಿಭಾಗದಿಂದ ದೃಢೀಕರಿಸಿ ಅಗತ್ಯ ದಾಖಲೆಗಳೊಂದಿಗೆ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ತಿಳಿಸಲಾಗಿದೆ.
10. ವಿಶ್ವವಿದ್ಯಾನಿಲಯವು ಕೋರಿರುವ ನಮೂನೆಗಳಲ್ಲಿ ಮತ್ತು ಚೆಕ್ ಲಿಸ್ಟ್‌ನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಲು ಮತ್ತು ಸೂಚನೆಗಳನ್ನು ಪಾಲಿಸಲು ತಿಳಿಸಲಾಗಿದೆ.
11. ವಿಶ್ವವಿದ್ಯಾನಿಲಯದಿಂದ ಸಂಯೋಜನೆ ಪಡೆಯದ ಯಾವುದೇ ಕಾಲೇಜುಗಳು, ವಿದ್ಯಾರ್ಥಿಗಳನ್ನು ಕೋರ್ಸು/ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ ಮತ್ತು ಪಠ್ಯಕ್ರಮ ಹಾಗೂ ವಿನಿಯಮ ಅನುಮೋದನೆಗೊಳ್ಳದ ಕೋರ್ಸು/ ವಿಷಯಗಳಿಗೆ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ.
12. ವಿದ್ಯಾರ್ಥಿಗಳ ಪ್ರವೇಶಾತಿಯನ್ನು ವಿನಿಯಮಕ್ಕನುಗುಣವಾಗಿ ಹಾಗೂ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಗಳನ್ವಯ ಮಾಡಿಕೊಳ್ಳುವುದು ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು ಅಥವಾ ಸಂಸ್ಥೆಯ ಮುಖ್ಯಸ್ಥರ ಪೂರ್ಣ ಜವಾಬ್ದಾರಿಯಾಗಿರುತ್ತದೆ ಮತ್ತು ನಿಯಮಗಳಿಗೆ ವಿರುದ್ಧವಾಗಿ ಮಾಡಿಕೊಳ್ಳಲಾಗುವ ಪ್ರವೇಶಾತಿಯು ಅಮಾನ್ಯವಾಗಿರುತ್ತದೆ.

13. ಹೊರ ರಾಜ್ಯದಲ್ಲಿ ದ್ವಿತೀಯ ಪಿ.ಯು.ಸಿ. ಪೂರೈಸಿರುವ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಹತಾ ಪ್ರಮಾಣ ಪತ್ರಕ್ಕಾಗಿ ನಿಗಧಿತ ನಮೂನೆಯೊಂದಿಗೆ ಅಂಕಪಟ್ಟಿಗಳು, ಕ್ಯುಮ್ಯೂಲೇಟಿವ್ ರೆಕಾರ್ಡ್ ಹಾಗೂ ಇತರೆ ಅವಶ್ಯ ದಾಖಲಾತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸುವುದು. ಅರ್ಹತಾ ಪ್ರಮಾಣ ಪತ್ರ ಒದಗಿಸದ ಹೊರ ರಾಜ್ಯದ ವಿದ್ಯಾರ್ಥಿಗಳನ್ನು ಯಾವುದೇಕಾರಣಕ್ಕೂ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ.
    ಹೊರ ದೇಶಗಳ ವಿದ್ಯಾರ್ಥಿಗಳನ್ನು ಪ್ರವೇಶಾತಿ ಮಾಡಿಕೊಳ್ಳುವಾಗ ಈ ಕೆಳಕಂಡ ದಾಖಲಾತಿಗಳನ್ನು ಪಡೆಯತಕ್ಕದ್ದು.

    ಎ. ಅರ್ಹತಾ ಪ್ರಮಾಣ ಪತ್ರ

    ಬಿ. ವಿದ್ಯಾರ್ಥಿಯ ವೀಸಾ

    ಸಿ. ಸಕ್ಷಮ ಪಾಧಿಕಾರವು ನೀಡಿರುವ A.I.D.S. ಮುಕ್ತ ಪ್ರಮಾಣ ಪತ್ರ

14. ಎರಡು ವರ್ಷಗಳ ಪಿ.ಯು.ಸಿ. ಕೋರ್ಸು ಅಥವಾ ತತ್ಸಮಾನ ಕೋರ್ಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ಯಾವುದೇ ವಿದ್ಯಾರ್ಥಿಯು ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿ ಪಡೆದುಕೊಳ್ಳುವುದು.
15. ವಿಶ್ವವಿದ್ಯಾನಿಲಯ/ರಾಜ್ಯ ಸರ್ಕಾರವು ನಿಗದಿಪಡಿಸಿರುವ ಪ್ರವೇಶ ಮಿತಿಗಿಂತ ಹೆಚ್ಚಾಗಿ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದಲ್ಲ. ಒಂದು ವೇಳೆ ಮಾಡಿಕೊಂಡಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 59 (18) ರನ್ವಯ ಅಂತಹ ಪ್ರವೇಶಾತಿಯು ಅಮಾನ್ಯವಾಗುತ್ತದೆ.
16. ವಿದ್ಯಾರ್ಥಿಯು ಪ್ರವೇಶ ಪಡೆದಿರುವ ಕೋರ್ಸಿಗೆ ಸಂಬಂಧಿಸಿದ ವಿನಿಯಮ, ಕನಿಷ್ಠ ಹಾಜರಾತಿ ಮತ್ತು ಪರೀಕ್ಷಾ ಸ್ವರೂಪವನ್ನು ಪ್ರತಿ ವರ್ಷ ವಿದ್ಯಾರ್ಥಿಗಳು ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು ಹಾಗೂ ಅನುಸರಣಾ ವರದಿಯನ್ನು ಪ್ರವೇಶ ಪಟ್ಟಿಯೊಂದಿಗೆ ಸಲ್ಲಿಸುವುದು.
17. ವಿಶ್ವವಿದ್ಯಾನಿಲಯದಿಂದ ಪೂರ್ವಾನುಮತಿ ಪಡೆಯದೇ ಯಾವುದೇ ವರ್ಗಾವಣೆ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದಲ್ಲ.
18. ಹೊರ ರಾಜ್ಯದಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳ ಪ್ರವೇಶಾತಿ ಪಟ್ಟಿಯನ್ನು ಅರ್ಹತಾ ಪ್ರಮಾಣ ಪತ್ರ ಹಾಗೂ ಇತರೆ ಅಗತ್ಯ ದಾಖಲಾತಿಗಳೊಂದಿಗೆ ಪ್ರತ್ಯೇಕವಾಗಿ ಸಲ್ಲಿಸತಕ್ಕದ್ದು.
19. ಪ್ರವೇಶಾತಿ ಪಟ್ಟಿಯನ್ನು ತಡವಾಗಿ ಸಲ್ಲಿಸುವುದು ವಿಶ್ವವಿದ್ಯಾನಿಲಯವು ನಿಗದಿಪಡಿಸುವ ದಂಡನೆಗೆ ಒಳಪಟ್ಟಿರುತ್ತದೆ.

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಪ್ರಾಂಶುಪಾಲರು, ಘಟಕ ಹಾಗೂ ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು– ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರಿಗೆ ಇ–ಮೇಲ್ ಮುಖಾಂತರ ಕಳುಹಿಸುವುದು.

ಪ್ರತಿಗಳು:–

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಡೀನರು, ಕಲಾ, ವಿಜ್ಞಾನ, ವಾಣಿಜ್ಯ ಮತ್ತು ಶಿಕ್ಷಣ ನಿಕಾಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಗ್ರಂಥಪಾಲಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
5. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
6. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
7. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
8. ಎನ್.ಎಸ್.ಎಸ್. ಕೋ–ಆರ್ಡಿನೇಟರ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
9. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
10. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
11. ಕಚೇರಿ ಪ್ರತಿ.